ಇ) ಬಾಗೇಪಲ್ಲಿ ಗುಡಿಬಂಡೆ ತಾಲ್ಲೂಕುಗಳಲ್ಲಿ ಜಾನುವಾರುಗಳ ವಿವರ ಕೆಳಕಂಡಂತಿವೆ:

ಜಾನುವಾರುಗಳು	ಬಾಗೇಪಲ್ಲಿ ತಾಲ್ಲೂಕು	ಗುಡಿಬಂಡೆ ತಾಲ್ಲೂಕು
ದನಗಳು	43527	14271
ಎಮ್ಮೆಗಳು	5411	1415
ಕುರಿಗಳು	79229	27737
ಮೇಕೆಗಳು	32805	9725
ಹಂದಿಗಳು	2221	682
ಒಂಟೆ	0	24
ಕುದುರೆ	9	0
ಕತ್ತೆ	52	15
ನಾಯಿ	10955	3852
ಮೊಲ	452	11
ಒಟ್ಟು	**1,74,661**	**57732**
ಕುಕ್ಕುಟಗಳು	134248	111449

2010–11ನೇ ಸಾಲಿನಲ್ಲಿ ಕರ್ನಾಟಕ ಹಾಲು ಉತ್ಪಾದಕರ ಸಹಕಾರ ಸಂಘಗಳು ಹಾಗೂ ಕರ್ನಾಟಕ ಜಾನುವಾರು ಅಭಿವೃದ್ಧಿ ಸಂಸ್ಥೆ ವತಿಯಿಂದ ಬಾಗೇಪಲ್ಲಿ ತಾಲ್ಲೂಕಿನಲ್ಲಿ ಒಟ್ಟು 1,732 ಹಾಗೂ ಗುಡಿಬಂಡೆ ತಾಲ್ಲೂಕಿನಲ್ಲಿ ಒಟ್ಟು 1,058 ಮಿಶ್ರತಳಿ ಹಸು ಮತ್ತು ಎಮ್ಮೆಗಳನ್ನು ವಿಮೆಗೆ ಒಳಪಡಿಸಲಾಗಿದೆ.

ಶುದ್ಧ ಕುಡಿಯುವ ನೀರು ಯೋಜನೆ ಬಗ್ಗೆ

119 (85): ಶ್ರೀ ಸಂಪಂಗಿ ಎನ್. (ಬಾಗೇಪಲ್ಲಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಚಿಕ್ಕಬಳ್ಳಾಪುರ ಜಿಲ್ಲೆ ಬಾಗೇಪಲ್ಲಿ–ಗುಡಿಬಂಡೆ ತಾಲ್ಲೂಕುಗಳಲ್ಲಿ ಕುಡಿಯುವ ನೀರಿನಲ್ಲಿ ಫ್ಲೋರೈಡ್ ಅಂಶ ಅಧಿಕವಾಗಿರುವುದರಿಂದ ಇಲ್ಲಿನ ಜನರು ಅನೇಕ ಖಾಯಿಲೆಗಳಿಗೆ ತುತ್ತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ ಇದರ ನಿವಾರಣೆಗೆ ಯಾವ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ;

ಆ) ಶುದ್ಧ ನೀರು ಒದಗಿಸಲು ಕೇಂದ್ರ, ರಾಜ್ಯ ಸರ್ಕಾರದಿಂದ ಇದುವರೆವಿಗೂ ಯಾವ ಯಾವ ಯೋಜನೆಯನ್ನು ಕುಡಿಯುವ ನೀರಿನ ವ್ಯವಸ್ಥೆಗೆ ಹಮ್ಮಿಕೊಂಡು ಎಷ್ಟು ಹಣವನ್ನು ಖರ್ಚು ಮಾಡಿ ಮೀಸಲಿರಿಸಲಾಗಿದೆ; ಇದರಲ್ಲಿ ಖರ್ಚಾಗಿರುವ ಹಣ ಎಷ್ಟು;

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) ಬಂದಿದೆ. ಅಧಿಕ ಫ್ಲೋರೈಡ್ ಬಾಧೆಗೊಳಗಾಗಿರುವ ತಾಲ್ಲೂಕುಗಳ ಗ್ರಾಮೀಣ ಜನವಸತಿಗಳಿಗೆ ಶುದ್ಧ ಕುಡಿಯುವ ನೀರು ಪೂರೈಕೆ ವ್ಯವಸ್ಥೆಗಾಗಿ ಭೂಮಿಯ ಮೇಲ್ಮೈ ಜಲಮೂಲ ಆಧಾರಿತ ಕುಡಿಯುವ ನೀರಿನ ಯೋಜನೆಗಳು, ಡೀ–ಫ್ಲೋರಿಡೇಷನ್ ಘಟಕಗಳ ಮೂಲಕ ಲಭ್ಯವಿರುವ ನೀರನ್ನು ಶುದ್ಧೀಕರಿಸಿ ಪೂರೈಸುವುದು ಹಾಗೂ ಮಳೆ ನೀರು ಕೊಯ್ಲು ವಿಧಾನಗಳನ್ನು ಅಳವಡಿಸುವ ಪರಿಕ್ರಮಗಳನ್ನು ಕೈಗೊಳ್ಳಲಾಗಿದೆ.

ಆ) ಶುದ್ಧ ಕುಡಿಯುವ ನೀರು ಪೂರೈಕೆ ವ್ಯವಸ್ಥೆಗಾಗಿ ಪ್ರಸಕ್ತ ಸಾಲಿನಲ್ಲಿ ರೂ. 24.00 ಕೋಟಿ ಕೇಂದ್ರ ಮತ್ತು ರಾಜ್ಯ ವಲಯಗಳಡಿ ಬಿಡುಗಡೆ ಮಾಡಲಾಗಿದೆ. ಈ ಪೈಕಿ, ರೂ.6.38 ಕೋಟಿ ಹಣ ವೆಚ್ಚ ಮಾಡಲಾಗಿದೆ.

ದೇವಸ್ಥಾನದ ಮಾಸ್ಟರ್ ಪ್ಲಾನ್ ಯೋಜನೆಯ ಬಗ್ಗೆ

120 (232): ಶ್ರೀ ಶಿವಶಂಕರ ರೆಡ್ಡಿ ಎನ್. ಹೆಚ್. (ಗೌರಿಬಿದನೂರು): ಮಾನ್ಯ ಉನ್ನತ ಶಿಕ್ಷಣ, ಯೋಜನೆ, ಸಾಂಖ್ಯಿಕ, ಮುಜರಾಯಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಗೌರಿಬಿದನೂರು ತಾಲ್ಲೂಕಿನ ಐತಿಹಾಸಿಕ ಮತ್ತು ತೀರ್ಥಕ್ಷೇತ್ರವಾದ ವಿದುರಾಶ್ವತ್ಥದ ಅಭಿವೃದ್ಧಿ ಸಲುವಾಗಿ ಮಾಸ್ಟರ್ ಪ್ಲಾನ್ ಯೋಜನೆಯ ಪ್ರಸ್ತಾಪನೆಯು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈ ಮಾಸ್ಟರ್ ಪ್ಲಾನ್ ಯೋಜನೆಯನ್ನು ಎಂದು ಜಾರಿಗೆ ತರಲಾಗುವುದು?